# ‘ಸಂಸಾರದಲ್ಲಿ ಹೊಂದಾಣಿಕೆ ಮುಖ್ಯ’

ಪ್ರಜಾವಾಣಿ ವಾರ್ತೆ

ಶಿರಸಿ: ಬದುಕಿನಲ್ಲಿ ಪತಿ, ಪತ್ನಿ ಪರಸ್ಪರ ಹೊಂದಾಣಿಕೆಯಿಂದ ಗೃಹಸ್ಥಾಶ್ರಮ ಧರ್ಮವನ್ನು ನಿಭಾಯಿಸಬೇಕು ಎಂದು ಸ್ವರ್ಣವಲ್ಲೀ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಹೇಳಿದರು.

ಸ್ವರ್ಣವಲ್ಲಿ ಮಠದಲ್ಲಿ ಶುಕ್ರವಾರ ನಡೆದ ಧನ್ಯೋಗೃಹಸ್ಥಾಶ್ರಮ ದಂಪತಿ ಶಿಬಿರದ ಸಾನ್ನಿಧ್ಯವಹಿಸಿ ನವ ದಂಪತಿಗೆ ಹಿತವಚನ ಬೋಧಿಸಿದರು.

‘ಕುಟುಂಬದಲ್ಲಿ ನನ್ನ ಮಾತೇ ನಡೆಯಬೇಕು ಎನ್ನುವ ಭಾವದಿಂದಲೇ ಬಹಳಷ್ಟು ಸಲ ಭಿನ್ನಾಭಿಪ್ರಾಯ ಉಂಟಾಗುತ್ತದೆ. ಇಂಥ ಮನಃಸ್ಥಿತಿಯ ಬದಲಾಗಿ ಹೊಂದಾಣಿಕೆ ಮನೋಭಾವದಿಂದ ಹೋದರೆ ಮಾತ್ರ ಗೃಹಸ್ಥಾಶ್ರಮ ಧನ್ಯತೆಯತ್ತ ಸಾಗುತ್ತದೆ. ಸಮಾಜದ ಆಧಾರ ಸ್ಥಂಭವಾದ ಗೃಹಸ್ಥ ಧರ್ಮದ ಆಚರಣೆ ಸರಿಯಾದ ರೀತಿಯಲ್ಲಾದರೆ ಪ್ರತಿಯೊಂದು ಮನೆಯೂ ಧಾರ್ಮಿಕ ಕೇಂದ್ರವಾಗುತ್ತದೆ. ಪ್ರತಿಯೊಂದು ದಂಪತಿ ಪರಸ್ಪರ ಅರಿತು, ಬೆರೆತು ಬದುಕುವುದನ್ನು ಆಚರಣೆಗೆ ತಂದುಕೊಳ್ಳಬೇಕು’ ಎಂದರು.

ಶಿಬಿರದಲ್ಲಿ ವಿನಾಯಕ ಹೆಬ್ಬಾರ ಅವರು ಭ್ರೂಣಹತ್ಯೆಯ ದುಷ್ಪರಿಣಾಮಗಳು ಹಾಗೂ ಉತ್ತಮ ಸಂತಾನಕ್ಕೆ ಪೂರ್ವ ಸಿದ್ಧತೆಗಳ ಬಗ್ಗೆ ಮಾಹಿತಿ ನೀಡಿದರು. ಸೀತಾರಾಮ್ ಭಟ್ ಮತ್ತಿಗಾರ್ ಅವರು ಉತ್ತಮ ಸಂತಾನಕ್ಕೆ ಶಾಸ್ತ್ರಸೂತ್ರಗಳ ಬಗ್ಗೆ ಹಾಗೂ ಅನಂತಮೂರ್ತಿ ಭಟ್ ಯಲೂಗಾರ ಅವರು ಬದುಕಿನ ಧನ್ಯತೆಯ ರಾಜಮಾರ್ಗ ಗೃಹಸ್ಥಾಶ್ರಮ ವಿಷಯದ ಮೇಲೆ ಮಾರ್ಗದರ್ಶಕ ಉಪನ್ಯಾಸ ನೀಡಿದರು.

ಮಠದ ಆಡಳಿತ ಮಂಡಳಿ ಅಧ್ಯಕ್ಷ ವಿ. ಎನ್. ಹೆಗಡೆ ಶಿಬಿರ ಉದ್ಘಾಟಿಸಿದರು. ಸರ್ವಜ್ಞೇಂದ್ರ ಸರಸ್ವತೀ ಪ್ರತಿಷ್ಠಾನದ ಕಾರ್ಯನಿರ್ವಾಹಕ ಉಪಾಧ್ಯಕ್ಷ ನಾರಾಯಣ ಭಟ್ ಬಳ್ಳಿ ಅಧ್ಯಕ್ಷತೆ ವಹಿಸಿದ್ದರು.



ಶಿರಸಿಯ ಸ್ವರ್ಣವಲ್ಲೀ ಮಠದಲ್ಲಿ ಆಯೋಜಿಸಿದ್ದ ಧನ್ಯೋ ಗ್ರಹಸ್ಥಾಶ್ರಮ ಶಿಬಿರದಲ್ಲಿ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಆಶೀರ್ವಚನ ನೀಡಿದರು